ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 465
ಸದಸ್ಯರ ಹೆಸರು : ಶ್ರೀ ಬಿ.ಕೆ.ಹರಿಪ್ರಸಾದ್
(ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ : 15-09-2021
ಉತ್ತರಿಸುವ ಸಚಿವರು : ಕಂದಾಯ ಸಚಿವರು

ಕ್ರ. ಸಂ	ಪ್ರಶ್ನೆ	ಉತ್ತರ
ಅ)	50, 55, 57, 94 ಸಿ ರಡಿ ಸಕ್ರಮಗೊಳಿಸಲು ಈಗಾಗಲೇ ಅರ್ಜಿ ಸಲ್ಲಿಸಿ ಸಕ್ರಮಕ್ಕೆ ಕಾಯುತ್ತಿರುವ ಅರ್ಹ ಫಲಾನುಭವಿಗಳಿಗೆ ಹಂಚಿಕೆ ಮಾಡುವ ನಿಟ್ಟಿನಲ್ಲಿ ಸರ್ಕಾರ ಶೀಘ್ರ ಕ್ರಮಕೈಗೊಳ್ಳುವುದೇ; (ಈ ಕುರಿತಂತೆ ಕೈಗೊಂಡ ಕ್ರಮಗಳ ಬಗ್ಗೆ ಸಂಪೂರ್ಣ ಮಾಹಿತಿ ಒದಗಿಸುವುದು)	ಸರ್ಕಾರಿ ಜಮೀನುಗಳಲ್ಲಿ ಅನಧಿಕೃತವಾಗಿ ಮಾಡುತ್ತಿರುವ ಸಾಗುವಳಿಯನ್ನು ಸಕ್ರಮಗೊಳಿಸುವ ಸಲುವಾಗಿ ಕ್ರಮವಾಗಿ ನಮೂನೆ 50, ನಮೂನೆ 53 ಮತ್ತು ನಮೂನೆ 57 ರಲ್ಲಿ ಸ್ವೀಕರಿಸಿದ ಅರ್ಜಿಗಳನ್ನು ನಿಯಮಾನುಸಾರ ಇತ್ಯರ್ಥಪಡಿಸಲು ದಿನಾಂಕ: 26.04.2022 ರವರೆಗೆ ಕಾಲಾವಕಾಶ ಕಲ್ಪಿಸಲಾಗಿದೆ. ಹಾಗೆಯೇ ಗ್ರಾಮಾಂತರ ಪ್ರದೇಶದಲ್ಲಿ ಅನಧಿಕೃತವಾಗಿ ನಿರ್ಮಿಸಿರುವ ವಾಸದ ಮನೆಗಳನ್ನು ಸಕ್ರಮಗೊಳಿಸುವ ಸಲುವಾಗಿ ಕರ್ನಾಟಕ ಭೂ ಕಂದಾಯ ಕಾಯ್ದೆ, 1964 ರ ಕಲಂ 94 ಸಿ ರಡಿಯಲ್ಲಿ ಸ್ವೀಕರಿಸಿದ ಅರ್ಜಿಗಳನ್ನು ಇತ್ಯರ್ಥಪಡಿಸಲು ದಿನಾಂಕ: 31.03.2023 ರವರೆಗೆ ಕಾಲಾವಕಾಶ ಕಲ್ಪಿಸಲಾಗಿದೆ.
ಆ)	ರೈತರಿಗೆ ಸುಲಭವಾಗಿ ತಮ್ಮ ಜಮೀನಿನ ಪಹಣಿ ಸಿಗುವ ನಿಟ್ಟಿನಲ್ಲಿ ಹಾಗೂ ಸರಳೀಕರಿಸುವ ನಿಟ್ಟಿನಲ್ಲಿ ಗ್ರಾಮ ಪಂಚಾಯತ್ ಮಟ್ಟದಲ್ಲಿ ಅವಕಾಶ ಕಲ್ಪಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಇದ್ದಲ್ಲಿ, ಸದರಿ ಯೋಜನೆ ಪ್ರಕ್ರಿಯೆಯು ಯಾವ ಹಂತದಲ್ಲಿದೆ? (ಸಂಪೂರ್ಣ ಮಾಹಿತಿ ಒದಗಿಸುವುದು)	ರೈತರು ಹಾಗೂ ಸಾರ್ವಜನಿಕರು ಪಹಣಿಗಳನ್ನು ಗ್ರಾಮ ಪಂಚಾಯತಿ, ನಾಡಕಚೇರಿ ಮತ್ತು ತಾಲ್ಲೂಕು ಕಚೇರಿ, ಸ್ಪಂದನಾ ಕೇಂದ್ರಗಳಲ್ಲಿ ಪಡೆಯಬಹುದಾಗಿರುತ್ತದೆ. ಇದಲ್ಲದೆ, ಆನ್ ಲೈನ್ I-RTC ತಂತ್ರಾಂಶದ ಮುಖಾಂತರ ಸಾರ್ವಜನಿಕರು ನಿಗದಿತ ಶುಲ್ಕವನ್ನು ಪಾವತಿಸಿ ಮುದ್ರಿಸಿಕೊಳ್ಳುವ ಸೌಲಭ್ಯವನ್ನು ಈಗಾಗಲೇ ಕಲ್ಪಿಸಲಾಗಿದೆ.

ಸಂಖ್ಯೆ: ಆರ್‌ಡಿ 130 ಎಲ್‌ಜಿಕ್ಯೂ 2021 (ಇ)

(ಆರ್. ಅಶೋಕ)
ಕಂದಾಯ ಸಚಿವರು.